# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಕ್ಕಳ ಸುರಕ್ಷತೆಗಾಗಿ ಮತ್ತು ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಹಾಗೂ ಮೇಲುಸ್ತುವಾರಿ ಮಾಡಲು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಪ್ರತ್ಯೇಕ ನಿರ್ದೇಶನಾಲಯ ಪ್ರಾರಂಭಿಸುವುದಕ್ಕೆ ಸಂಬಂಧಿಸಿದಂತೆ ಹುದ್ದೆಗಳನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕಕಡತ ಪ್ರಸ್ತಾವನೆ ಸಂ:ಕರಾಸಮರಸೊ/ ಆಡಳಿತ/ ಪ್ರತ್ಯೇಕ.ನಿ-17/2018-19, ದಿನಾಂಕ: 13.07.2018

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಕ್ಕಳ ಸುರಕ್ಷತೆಯು ಸರ್ಕಾರದ ಆದ್ಯತೆಯಾಗಿದ್ದು, ಈ ನಿಟ್ಟಿನಲ್ಲಿ ಮಕ್ಕಳ ರಕ್ಷಣಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪ್ರತ್ಯೇಕ ನಿರ್ದೇಶನಾಲಯವನ್ನು ಪ್ರಾರಂಭಿಸಲಾಗುವುದೆಂದು ಘೋಷಿಸಲಾಗಿರುತ್ತದೆ.

ದಿನಾಂಕ:11.08.2017ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆಯನ್ನು ನಿಯಂತ್ರಿಸುವ ಕುರಿತು ವಿವಿಧ ಇಲಾಖೆಗಳ ಮಧ್ಯೆ ಸಮನ್ವಯ ಸಾಧಿಸುವ ದೃಷ್ಟಿಯಿಂದ ರಾಜ್ಯ ಮಟ್ಟದ ಮಾನವ ಅಕ್ರಮ ಸಾಗಾಣಿಕೆ ಸಮನ್ವಯ ಸಮಿತಿ ಸಭೆಯಲ್ಲಿ ಸುಧಾರಣಾ ಸಂಸ್ಥೆಗಳಲ್ಲಿನ ಸಿಬ್ಬಂದಿ ಇತರೆ ವಿಭಾಗಗಳಲ್ಲಿ ಅಂದರೆ, ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸಲು ಆಸಕ್ತಿ ವ್ಯಕ್ತಪಡಿಸುವುದರಿಂದ ಬಾಲಮಂದಿರ ಮತ್ತು ವೀಕ್ಷಣಾಲಯ ಸಂಸ್ಥೆಗಳಲ್ಲಿ ಸಿಬ್ಬಂದಿ ಕೊರತೆ ಉಂಟಾಗುತ್ತಿರುವುದರಿಂದ ಈ ಬಗ್ಗೆ ಸುಧಾರಣಾ ಸಂಸ್ಥೆಗಳ ಸಿಬ್ಬಂದಿ ನೇಮಕಾತಿಗಾಗಿ ಪ್ರತ್ಯೇಕ ನಿಯಮಗಳನ್ನು ರಚಿಸಿದಲ್ಲಿ ಉಪಯುಕ್ತವಾಗುವ ಬಗ್ಗೆ ಸೂಕ್ತ ಪ್ರಸ್ತಾವನೆ ಸಲ್ಲಿಸುವಂತೆ ಸೂಚನೆ ನೀಡಿರುತ್ತಾರೆ.

ಮಕ್ಕಳ ಸುರಕ್ಷತೆಯ ಸಲುವಾಗಿ ಪ್ರತ್ಯೇಕ ನಿರ್ದೇಶನಾಲಯವನ್ನು ಪ್ರಾರಂಭಿಸಲು ಪ್ರಸ್ತುತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಬರುವ ಈ ಕೆಳಕಂಡ ಕಾರ್ಯಕ್ರಮಗಳನ್ನು ಹೊಸ ನಿರ್ದೇಶನಾಲಯದಡಿ ತರಬಹುದಾಗಿದೆ ಎಂದು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರವರು ತಿಳಿಸಿರುತ್ತಾರೆ.

| ಪ್ರಸ್ತುತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಇರುವ ಕಾರ್ಯಕ್ರಮಗಳು | | | | |
|---|---|---|---|---|
| ಕ್ರ.ಸಂ | ಕಾರ್ಯಕ್ರಮದ ವಿವರ | ಹುದ್ದೆಗಳು | ಅನುದಾನ 2017-18 (ರೂ. ಕೋಟಿಗಳಲ್ಲಿ) | ಅನುದಾನ 2018-19 (ರೂ. ಕೋಟಿಗಳಲ್ಲಿ) |
| 1 | ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ | 378 | 116.62 | 68.11 |

15 NOV 2018

ICPS

..2

| | | | | |
|---|---|---|---|---|
| 2 | ಬಾಲಮಂದಿರಗಳು/ ವೀಕ್ಷಣಾಲಯಗಳು/ ಅನುಪಾಲನಾ ಗೃಹ | | ಐ.ಸಿ.ಪಿ.ಎಸ್ ನಲ್ಲಿ ವಿಲೀನಗೊಂಡಿದೆ | |
| 3 | ಬಾಲ್ಯ ವಿವಾಹ ನಿಷೇಧ ಕೋಶ ಅಧಿನಿಯಮ | 7 | 1.50 | 1.50 |
| 4 | ದತ್ತು ಕೋಶ | 4 | ಐ.ಸಿ.ಪಿ.ಎಸ್ ನಲ್ಲಿ ವಿಲೀನಗೊಂಡಿದೆ | |
| 5 | ಅಪರಾಧಿಗಳ ಪರಿವೀಕ್ಷಣಾ ಅಧಿನಿಯಮ | 62 | 02.00 | 02.00 |
| 6 | ವಿಶೇಷ ಪಾಲನಾ ಯೋಜನೆ | ಐ.ಸಿ.ಪಿ.ಎಸ್ ಅಡಿಯಲ್ಲಿ ಅನುಷ್ಠಾನಗೊಳಿಸ ಲಾಗುತ್ತಿದೆ. | 15.00 | 15.00 |
| 7 | ಅನಾಥ ಮಕ್ಕಳ ಖಚಿತ ಆದಾಯ ಯೋಜನೆ | | 00.25 | 00.01 |

ಮೊದಲನೇ ಹಂತದಲ್ಲಿ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ನಿರ್ದೇಶಕರು ಮತ್ತು ಇತರೆ ಹೆಚ್ಚುವರಿ 160 ಹುದ್ದೆಗಳನ್ನು ಸೃಜಿಸಲು ಪ್ರಸ್ತಾಪಿಸಿದ್ದು, ಸದರಿ ಪ್ರಸ್ತಾವನೆಗೆ ಅಗತ್ಯವಿರುವ ಹೆಚ್ಚುವರಿ ಹಣವನ್ನು ಪೂರ್ಣವಾಗಿ ರಾಜ್ಯ ಸರ್ಕಾರದಿಂದ ಭರಿಸಬೇಕಿದೆ. ಇದನ್ನು ಹೊಸ ಲೆಕ್ಕ ಶೀರ್ಷಿಕೆ 2235-02-102-0-37 ಅಡಿಯಲ್ಲಿ ಹೆಚ್ಚುವರಿಯಾಗಿ ರೂ.754.25ಲಕ್ಷ ಒದಗಿಸುವಂತೆ ನಿರ್ದೇಶಕರು ಕೋರಿರುತ್ತಾರೆ.

ಘೋಷಣೆಯಂತೆ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಸಮರ್ಪಕ ಅನುಷ್ಠಾನಕ್ಕೆ ಅನುಬಂಧದಲ್ಲಿ ವಿವರಿಸಲಾದಂತೆ ಕಾರ್ಯಕ್ರಮದ ರೂಪುರೇಷೆ ಸಿದ್ಧಪಡಿಸಿ ಹಾಗೂ ಅನುದಾನದ ವೆಚ್ಚದ ಬಗ್ಗೆ ವಿವರ ನೀಡಿ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಯೋಜನೆಗಳ ಅನುಷ್ಠಾನಕ್ಕೆ ಅವಶ್ಯಕವಿರುವ ಅನುದಾನ ರೂ.754.25ಲಕ್ಷಗಳನ್ನು ಲೆಕ್ಕಶೀರ್ಷಿಕೆ:2235-02-102-0-37 ಹೆಚ್ಚುವರಿಯಾಗಿ ಒದಗಿಸಲು ಹಾಗೂ ಕಾರ್ಯಕ್ರಮ ಅನುಷ್ಠಾನಗೊಳಸಲು ಮಂಜೂರಾತಿ ನೀಡುವಂತೆ ಮೇಲೆ ಓದಲಾದ ಏಕ ಕಡತದಲ್ಲಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

2018-19ನೇ ಸಾಲಿನ ಫೆಬ್ರವರಿ ಆಯವ್ಯಯ ಭಾಷಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಗೆ ಸಂಬಂಧಿಸಿದಂತೆ ಭಾಷಣದ ಕಂಡಿಕೆ ಹಾಗೂ ಆಯವ್ಯಯ ಭಾಷಣದಲ್ಲಿ ಘೋಷಣೆ ಕ್ರಮ ಸಂಖ್ಯೆ:147ರಲ್ಲಿ ಮಕ್ಕಳ ಸುರಕ್ಷತೆಯು ಸರ್ಕಾರದ ಆದ್ಯತೆಯಾಗಿದ್ದು, ಈ ನಿಟ್ಟಿನಲ್ಲಿ ಮಕ್ಕಳ

ರಕ್ಷಣಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ನಿರ್ದೇಶನಾಲಯವನ್ನು ಪ್ರಾರಂಭಿಸಲಾದ್ದು, ಈ ಯೋಜನೆಗಾಗಿ ಲೆಕ್ಕ ಶೀರ್ಷಿಕೆ 2235-02-102-0-06-059 (ಸಮಗ್ರ ಮಕ್ಕಳ ಸಂರಕ್ಷಣಾ ಯೋಜನೆ) (ICPS) ರಡಿ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳುವ ಷರತ್ತಿಗೊಳಪಟ್ಟು ಸಹಮತಿ ನೀಡಿದೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 467 ಎಸ್‌ಜೆಡಿ 2017, ಬೆಂಗಳೂರು**
**ದಿನಾಂಕ: 15.11.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಂತೆ, ಮಕ್ಕಳ ಸುರಕ್ಷತೆಗಾಗಿ ಮತ್ತು ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಹಾಗೂ ಮೇಲುಸ್ತುವಾರಿ ಮಾಡಲು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಪ್ರತ್ಯೇಕ ನಿರ್ದೇಶನಾಲಯವನ್ನು ಪ್ರಾರಂಭಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ.

| ಕ್ರ.ಸಂ. | ಹುದ್ದೆಯ ಪದನಾಮ ಮತ್ತು ವೇತನ ಶ್ರೇಣಿ | ಸೃಜಿಸಲಾದ ಹುದ್ದೆಗಳ ಸಂಖ್ಯೆ |
|---|---|---|
| 1 | ನಿರ್ದೇಶಕರು (ಐಸಿಪಿಎಸ್)<br>ಸಮಗ್ರ ಮಕ್ಕಳ ರಕ್ಷಣಾ ಯೋಜನೆ<br>(ಭಾರತೀಯ ಆಡಳಿತ ಸೇವೆಯ ಹಿರಿಯ /ಕಿರಿಯ ವೇತನ ಶ್ರೇಣಿ) | 1 |
| 2 | ಆಪ್ತ ಸಹಾಯಕರು<br>(ರೂ.27,650-52,650) | 1 |
| 3 | ಗ್ರೂಪ್ 'ಡಿ'<br>(ರೂ.17,000-28,950) | 1 |
| 4 | ವಾಹನ ಚಾಲಕರು<br>(ರೂ.21,400-42,000) | 1 |
| | ಒಟ್ಟು | 4 |

ಉಳಿದ ಎಲ್ಲಾ ಇತರ ಹುದ್ದೆಗಳನ್ನು ಹೊಸದಾಗಿ ಸೃಜಿಸುವ ಬದಲು ಈಗಾಗಲೇ ಐ.ಸಿ.ಪಿ.ಎಸ್. ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಮರು ವಿನ್ಯಾಸದೊಂದಿಗೆ ಕಾರ್ಯಗತಗೊಳಿಸಲು ತಿಳಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 423 ವೆಚ್ಚ-10/2018, ದಿನಾಂಕ:10.08.2018 ಕ್ರಮ ಸಂಖ್ಯೆ:2ರಲ್ಲಿ ಮತ್ತು ಟಿಪ್ಪಣಿ ಸಂಖ್ಯೆ: ಆಇ 578 ವೆಚ್ಚ-10 2018, ದಿನಾಂಕ:10.10.2018ರಲ್ಲಿ ನೀಡಲಾದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ರಾಜಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಇವರಿಗೆ:

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ 100 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸುವುದು.**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560 001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
3. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಪಿಎಂಐ ವಿಭಾಗ, ಯೋಜನಾ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
5. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನಸೌಧ, ಬೆಂಗಳೂರು.
8. ಖಜಾನೆ ಉಪ ನಿರ್ದೇಶಕರು, ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು

11. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತಕಾರ್ಯದರ್ಶಿ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.